## ಕರ್ನಾಟಕ ಸರ್ಕಾರದ ನಡವಳಿಗಳು

(ಜಲಸಂಪನ್ಮೂಲ ಇಲಾಖೆ)

**ವಿಷಯ:-** ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ತಾಲ್ಲೂಕು ಕಲ್ಲುವಡ್ಡ ಹಳ್ಳ ಹೊಸಕೆರೆ ನಿರ್ಮಾಣದ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** 1.ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ KNN-01-TK-NTP-SHI-06/5432, ದಿನಾಂಕ :- 21-02-06.

2. ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಸಅಸ/ಜವಿಫ/ತಾಸ-4/2006-07 ದಿನಾಂಕ: 1.06.2006.

3. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ ಇವರ ಪತ್ರ ಸಂಖ್ಯೆ: ಮು.ಇಂ/ಕನೀನಿನಿ/ತುಂಮೇಯೋವ/ಶಿ/ಕಲ್ಲುವಡ್ಡು/2006-07 ದಿನಾಂಕ: 11.07.2006.

**ಪ್ರಸ್ತಾವನೆ:-**

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಕಲ್ಲುವಡ್ಡಹಳ್ಳಕ್ಕೆ ಅಡ್ಡಲಾಗಿ ಹೊಸಕೆರೆ ನಿರ್ಮಾಣ ಮಾಡಿ ಶಿಕಾರಿಪುರ ತಾಲ್ಲೂಕಿನ 14 ಗ್ರಾಮಗಳ ಸುಮಾರು 1950 ಹೆ. ಜಮೀನಿಗೆ ನೀರಾವರಿ ಒದಗಿಸಲು ಯೋಜಿಸಲಾಗಿದೆ. ಈ ಪ್ರಸ್ತಾವನೆಗೆ ತಾಂತ್ರಿಕ ಸಲಹಾ ಸಮಿತಿಯು 08.07.1997ರಲ್ಲಿ ಕೆಲವು ನಿಬಂಧನೆಗಳಿಗೆ ಒಳಪಟ್ಟಂತೆ ಸಹಮತಿ ನೀಡಿರುತ್ತದೆ. ನಂತರ ಬೃಹತ್ ನೀರಾವರಿ ಯೋಜನೆಗಳ ನಿಯಂತ್ರಣ ಮಂಡಲಿಯು ದಿನಾಂಕ: 26.07.1997ರಲ್ಲಿ ಪ್ರಸ್ತಾವನೆಗೆ ಹಲವು ಷರತ್ತುಗಳಿಗೆ ಒಳಪಟ್ಟಂತೆ ಅನುಮೋದನೆ ನೀಡಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ರವರು ಕೆರೆ ನಿರ್ಮಾಣ ಸ್ಥಳದಲ್ಲಿ ನೀರಿನ ಲಭ್ಯತೆ ಇರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಮುಖ್ಯ ಇಂಜಿನಿಯರ್ ರವರು ಯೋಜನೆಯ ಪ್ರಸ್ತಾವನೆಯನ್ನು 2005-06ನೇ ಸಾಲಿನ ಸಣ್ಣ ನೀರಾವರಿ ಇಲಾಖೆಯ ದರಪಟ್ಟಿಯಂತೆ ರೂ 20.42 ಕೋಟಿಗಳಿಗೆ ತಯಾರಿಸಿ ಸಲ್ಲಿಸಿರುತ್ತಾರೆ. ಈ ಯೋಜನೆಯನ್ನು ಕರ್ನಾಟಕ ನೀರಾವರಿ ನಿಗಮದ ವತಿಯಿಂದ ಕಾರ್ಯಗತಗೊಳಿಸಲು ಸರ್ಕಾರವು ತೀರ್ಮಾನಿಸಿದೆ.

-523-



ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ನಿಗಮಕ್ಕೆ ಬಿಡುಗಡೆ ಮಾಡಲಾಗುವ ಅನುದಾನದಲ್ಲಿಯೇ ಯೋಜನೆಯನ್ನು ಕೈಗೆತ್ತಿಕೊಂಡು ಕಾರ್ಯಗತಗೊಳಿಸಲಾಗುವುದೆಂದು ತಿಳಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 122 ಎಂಎಂಬಿ 2004.</u>**

**<u>ಬೆಂಗಳೂರು, ದಿನಾಂಕ 30/08/2006.</u>**

ಶಿವಮೊಗ್ಗ ಜಿಲ್ಲೆ ಶಿಕಾರಿಪುರ ತಾಲ್ಲೂಕು ಕಲ್ಲುವಡ್ಡುಹಳ್ಳ ಹೊಸಕೆರೆ ನಿರ್ಮಾಣದ ರೂ. 2042 ಲಕ್ಷಗಳ (ರೂ. ಇಪ್ಪತ್ತು ಕೋಟಿ ನಲವತ್ತೆರಡು ಲಕ್ಷ) ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಈ ಯೋಜನೆಯನ್ನು ಕರ್ನಾಟಕ ನೀರಾವರಿ ನಿಗಮದ ಮೂಲಕ ಕೈಗೊಳ್ಳುವಂತೆ ಆದೇಶಿಸಲಾಗಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣಾ) ನಿಯಮಗಳು, 1977ರ ಕೆಳಕಂಡ ಅವಕಾಶದ ಅನ್ವಯ ಹೊರಡಿಸಲಾಗಿದೆ :

This Order falls within the purview of the proviso to sub-rule (2) of rule 17 of the Karnataka Government (Transaction of Business) Rules, 1977

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್. ಶಿವಶಂಕರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು, 1 ಮತ್ತು 2 (ಲೆಕ್ಕ ಪತ್ರಗಳು) ಕರ್ನಾಟಕ, ಬೆಂಗಳೂರು
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
3) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಸಂಪುಟ ವ್ಯವಹಾರಗಳ ಇಲಾಖೆ (ಸಚಿವ ಸಂಪುಟ)-ವಿಷಯ ಸಂಖ್ಯೆ: ಸಿ-254/2006
4) ಪ್ರಧಾನ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದರಾವ್ ವೃತ್ತ, ಬೆಂಗಳೂರು
5) ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
6) ಅಧೀಕ್ಷಕ ಅಭಿಯಂತರರು, ಭದ್ರಾ ಯೋಜನಾ ವೃತ್ತ, ಬಿ.ಆರ್ ಪ್ರಾಜೆಕ್ಟ್
7) ವಿಶೇಷ ಕರ್ತವ್ಯಾಧಿಕಾರಿ ಹಾಗು ಪದನಿಮಿತ್ತ ಉಪಕಾರ್ಯದರ್ಶಿ, (ಲೋಕೋಪಯೋಗಿ ಇಲಾಖೆ, ಆರ್ಥಿಕ ಕೋಶ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8) ಶಾಖಾ ರಕ್ಷಾ ಕಡತ
9) ಹೆಚ್ಚುವರಿ ಪ್ರತಿಗಳು.